# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 323
**ಮಾನ್ಯ ಸದಸ್ಯರ ಹೆಸರು** : ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ)
**ಉತ್ತರಿಸಬೇಕಾದ ದಿನಾಂಕ** : 15-02-2024
**ಉತ್ತರಿಸುವ ಸಚಿವರು** : ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಮನಗರ ಜಿಲ್ಲೆ, ಮಾಗಡಿ ಟೌನ್‌ನಲ್ಲಿ ನಾಡಪ್ರಭು ಕೆಂಪೇಗೌಡರ ಕೋಟೆ ಜೀರ್ಣೋದ್ಧಾರಕ್ಕೆ ಸರ್ಕಾರದಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ. | 2013-14ನೇ ಸಾಲಿನಲ್ಲಿ ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯವು ಅನುಮೋದನೆ ನೀಡಿರುವ ರೂ.486.79 ಲಕ್ಷಗಳ ಕಾಮಗಾರಿಗಳಲ್ಲಿ, Site Development Worksನಡಿ ಮಾಗಡಿ ಕೋಟೆಯ ಸಂರಕ್ಷಣಾ ಕಾಮಗಾರಿಯನ್ನು ರೂ.291.17ಲಕ್ಷಗಳ ವೆಚ್ಚದಲ್ಲಿ ಕೈಗೊಂಡು ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ.<br><br>ಈ ಕಾಮಗಾರಿಗೆ ರೂ.291.17ಲಕ್ಷಗಳ ಅನುದಾನ ಬಿಡುಗಡೆಗೊಂಡಿದೆ. |
| ಆ) | ಇದನ್ನು ಪೂರ್ಣಗೊಳಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು; | ಮಾಗಡಿ ಕೋಟೆಯ ಒಟ್ಟಾರೆ ಉದ್ದ 1030 ಮೀಟರ್ ಇದ್ದು, ಇದರಲ್ಲಿ 528 ಮೀಟರ್ ಕೋಟೆ ಗೋಡೆಯು ಸಂರಕ್ಷಣೆಗೊಳಿಸಿ ಸುಸ್ಥಿತಿಯಲ್ಲಿರುತ್ತದೆ. ಬಾಕಿ 502 ಮೀಟರ್ ಸಂರಕ್ಷಣೆ ಕೈಗೊಳ್ಳುವುದು ಬಾಕಿ ಇರುತ್ತದೆ.<br><br>ಈ 502 ಮೀಟರ್ ಕೋಟೆ ಗೋಡೆಯ ಸಂರಕ್ಷಣೆಗಾಗಿ ಪುರಾತತ್ವ ಇಲಾಖೆಯ ವತಿಯಿಂದ ರೂ.570.00 ಲಕ್ಷಗಳ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿ ಈ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿಯನ್ನು ನೀಡುವಂತೆ ಆಯುಕ್ತರು, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ರವರು ದಿನಾಂಕ:30.03.2021 ಮತ್ತು 22.08.2022ರಲ್ಲಿ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ರವರಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಮತ್ತು ಕೋಟೆಯ ಸಂರಕ್ಷಣೆಗಾಗಿ ಅನುದಾನ ಬಿಡುಗಡೆಗೊಳಿಸಲು ಆಯುಕ್ತರು, ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ದಿನಾಂಕ:21.06.2022ರಲ್ಲಿ ಪತ್ರ ಬರೆದಿರುತ್ತಾರೆ.<br><br>ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣಗಳ ಅಭಿವೃದ್ಧಿ ಪ್ರಾಧಿಕಾರದ 6ನೇ ಸಭೆಯಲ್ಲಿಯೂ ಸಹ ಈ ಕೋಟೆಯ ಸಂರಕ್ಷಣೆ ವಿಷಯವು ಚರ್ಚಿತಗೊಂಡು, ಈ ಸಂಬಂಧ ಬಿಬಿಎಂಪಿ, ಬಿಡಿಎ, ಬಿಎಂಆರ್‌ಡಿಎ ಬಳಿ ಇರುವ ಅನುದಾನಗಳಲ್ಲಿ ಪ್ರಾಧಿಕಾರಕ್ಕೆ ಅನುದಾನವನ್ನು ಕೋರಬಹುದಾಗಿರುತ್ತದೆ ಎಂಬುದಾಗಿ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಈ ಬಗ್ಗೆ ಸಕ್ಷಮ ಪ್ರಾಧಿಕಾರದ ಮೂಲಕ ನಗರಾಭಿವೃದ್ಧಿ ಇಲಾಖೆಗೆ ಪ್ರಸ್ತಾವನೆ ಸಲ್ಲಿಸುವಂತೆ ಸರ್ವಾನುಮತದಿಂದ ತೀರ್ಮಾನಿಸಲಾಗಿದೆ.<br><br>ಮುಂದುವರೆದು ಆಯುಕ್ತರು/ವಿಶೇಷಾಧಿಕಾರಿಗಳು, ನಾಡಪ್ರಭು ಕೆಂಪೇಗೌಡ ಪಾರಂಪರಿಕ ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಮಾಗಡಿ ಕೋಟೆಯ ಸಂರಕ್ಷಣೆಗಾಗಿ ಇಲಾಖೆಯ ವತಿಯಿಂದ ಸಲ್ಲಿಸಿರುವ ರೂ.570.00 ಲಕ್ಷಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ದಿನಾಂಕ:04.07.2022ರಂದು ನಗರಾಭಿವೃದ್ಧಿ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. |

<table>
<tr><td>ಇ)</td><td>ಇದರ ಕಾಮಗಾರಿ ಪ್ರಗತಿ ಪ್ರಸ್ತುತ ಯಾವ ಹಂತದಲ್ಲಿದೆ;</td><td rowspan="2">ರೂ.570.00 ಲಕ್ಷಗಳ ಅಂದಾಜಿಗೆ ಆಡಳಿತಾತ್ಮಕ ಮಂಜೂರಾತಿ ದೊರೆತ ನಂತರ ನಿಯಮಾನುಸಾರ ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಕಾರ್ಯಾದೇಶ ನೀಡಿದ ದಿನಾಂಕದಿಂದ 18 ತಿಂಗಳ ಕಾಲಾವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.</td></tr>
<tr><td>ಈ)</td><td>ಈ ಜೀರ್ಣೋದ್ಧಾರ ಕಾರ್ಯವನ್ನು ಯಾವಾಗ ಪೂರ್ಣಗೊಳಿಸಲಾಗುವುದು ?</td></tr>
</table>

TOR 46 TDV 2024

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು.